# *Form No.4.*

# *Deposition Sheet( R.P.52)*

ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಹೆಚ್ಚುವರಿ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಾರ್ಕಳ.

**MVC 1243/2023**

**PW1**

| | | |
|---|---|---|
| ಸಾಕ್ಷಿಯ ಹೆಸರು | ಃ | ಅಜಯ್ |
| ತಂದೆ ಹೆಸರು | ಃ | ಮುರುಗೇಶ್ |
| ಪ್ರಾಯ | ಃ | **21 ವರ್ಷ** |
| ಉದ್ಯೋಗ | ಃ | ಕೆಲಸ ಇರುವುದಿಲ್ಲ. |
| ವಾಸ | ಃ | ಕುಕ್ಕಂದೂರು, ಕಾರ್ಕಳ |

ದಿನಾಂಕ **: 23.12.2025** ರಂದು ಪಿಡಬ್ಲ್ಯೂ - 1 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಎನ್.ವಿ.ಪಿ. ಅರ್ಜಿದಾರರ ಪರ ವಕೀಲರಿಂದಃ

1. ನಾನು ಈ ಕೇಸಿನ ಅರ್ಜಿದಾರ. ನನ್ನ ಮುಖ್ಯ ವಿಚಾರಣೆಯ ಬದಲಿಗೆ ನಾನು ಈ ದಿನ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು , ಸದರಿ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಅಂಶಗಳು ಸತ್ಯವಾಗಿವೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ನಿಪಿ - 2 ಎಂದು, ಸ್ಥಳ ಮಹಜರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 3 ಎಂದು, ಕಚ್ಚಾ ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 4 ಎಂದು, ಐಎಮ್‌ವಿ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 5 ಎಂದು, ಕಲಂ 160 ರ ನೋಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 6 ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 7 ಎಂದು, ನನ್ನ ಆಧಾರ್ ಕಾರ್ಡನ್ನು ಮತ್ತು ಅದರ ನೋಟರೀಕೃತ ನಕಲನ್ನು ಹಾಜರುಪಡಿಸಿದ್ದೇನೆ. (ನೋಟರೀಕೃತ ನಕಲನ್ನು ಮೂಲಪ್ರತಿಯೊಂದಿಗೆ ಹೋಲಿಸಿ ನೋಡಿದ ನಂತರ ಮೂಲಪ್ರತಿಯನ್ನು ಸಾಕ್ಷಿಗೆ ಹಿಂತಿರುಗಿಸಲಾಯಿತು). ಆಧಾರ್ ಕಾರ್ಡಿನ ನೋಟರೀಕೃತ ನಕಲನ್ನು ನಿಪಿ - 8 ಎಂದು, ವಾಹನದ ಮಾಲೀಕರಿಗೆ ಪೋಲೀಸರು ಕಲಂ 133 ರಡಿಯಲ್ಲಿ ನೀಡಿದ ನೋಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 9 ಎಂದು, ಸದರಿ ನೋಟೀಸಿಗೆ ನೀಡಿರುವ ಪ್ರತ್ಯುತ್ತರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 10 ಎಂದು, ಆರೋಪಿಗೆ ಪೋಲೀಸರು ನೀಡಿದ ನೋಟೀಸನ್ನು ನಿಪಿ - 11 ಎಂದು, ಅಪಘಾತಕ್ಕೆ ಸಂಬಂಧಿಸಿದ ಪೋಟೋವಿನ ದೃಢೀಕೃತ ನಕಲನ್ನು ನಿಪಿ - 12 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಎದುರುದಾರರು ಏಕತರ್ಫಿಯಾದ ಕಾರಣ ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆಃ ಇಲ್ಲ.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,

ಕಾರ್ಕಳ.